ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

15

ಇಲಾಖೆ / ವಿಷಯ : DEPARTMENT / SUBJECT: ಗೃಹ - ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 15/3/21

# ಸೀಡಿ ಯುವತಿ ಕಡೆಗೂ ಪತ್ತೆ

## ಹೈದ್ರಾಬಾದ್‌ನಿಂದ ಬೆಂಗಳೂರಿಗೆ ಕರೆತರುತ್ತಿರುವ ಪೊಲೀಸರು
## ಯುವತಿಯ ವಿಜಯಪುರ, ಬಾಗಲಕೋಟೆ ಮನೆಗೆ ನೋಟಿಸ್

• ಕನ್ನಡಪ್ರಭ ವಾರ್ತೆ ಬೆಂಗಳೂರು/ ಬಾಗಲಕೋಟೆ/ವಿಜಯಪುರ



ಮಾಜಿ ಸಚಿವರೊಬ್ಬರ ಲೈಂಗಿಕ ಹಗರಣದ ಸಿ.ಡಿ.ಯಲ್ಲಿರುವ ಯುವತಿಯನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ಹೊರರಾಜ್ಯದಲ್ಲಿ ಪತ್ತೆಹಚ್ಚಿದ್ದು, ಬೆಂಗಳೂರಿಗೆ ಕರೆತರುತ್ತಿದೆ ಎಂದು ತಿಳಿದುಬಂದಿದೆ.

ಕಳೆದ 12 ದಿನಗಳಿಂದ ಅಜ್ಞಾತವಾಗಿದ್ದ ಯುವತಿ ಎರಡು ದಿನಗಳ ಹಿಂದೆಯಷ್ಟೇ ರಮೇಶ್ ಜಾರಕಿಹೊಳಿ ವಿರುದ್ಧ ಆರೋಪ ಮಾಡಿ ರಕ್ಷಣೆ ಕೋರಿದ್ದಳು. ಇದೀಗ ಯುವತಿಯನ್ನು ಮಹಿಳಾ ಇನ್ಸ್‌ಪೆಕ್ಟರ್ ನೇತೃತ್ವದ ತಂಡ ಹೈದರಾಬಾದ್‌ನಲ್ಲಿ ಪತ್ತೆಹಚ್ಚಿದೆ ಎಂದು ಮೂಲಗಳು ತಿಳಿಸಿವೆ.

ಪ್ರಕರಣದಲ್ಲಿ ಈಗಾಗಲೇ ಖಾಸಗಿ ಸುದ್ದಿವಾಹಿನಿ ವರದಿಗಾರರು ಸೇರಿದಂತೆ ಹಲವರನ್ನು ವಿಚಾರಣೆಗೊಳಪಡಿಸಲಾಗಿದೆ. ಯುವತಿಯ ಪ್ರಿಯತಮನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದು, ಆತಕೊಟ್ಟಮಾಹಿತಿಮೇರೆಗೆಭಾನುವಾರಯುವತಿಯನ್ನು ಪತ್ತೆಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ. ಇದೇ ವೇಳೆ ಯುವತಿ ಬಳಿ ಕಂಪ್ಯೂಟರ್ ಹಾಗೂ ದಾಖಲೆಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ ಎನ್ನಲಾಗಿದೆ. » 10

# ಸೀಡಿ ಪ್ರಕರಣ: ಯುವತಿ ಕಡೆಗೂ ಪತ್ತೆ

« ಮೊದಲ ಪುಟದಿಂದ

ಶನಿವಾರವಷ್ಟೇ ವಿಡಿಯೋ ಬಿಡುಗಡೆ ಮಾಡಿದ್ದ ಯುವತಿ ಹೈದರಾಬಾದ್‌ನಲ್ಲಿರುವ ಬಗ್ಗೆ ಮಾಹಿತಿ ಎಸ್‌ಐಟಿ ತಂಡಕ್ಕೆ ಸಿಕ್ಕಿತ್ತು. ಯುವತಿ ಹೈದರಾಬಾದ್‌ನ ಪಂಚತಾರಾ ಹೋಟೆಲ್ ಒಂದರಲ್ಲಿದ್ದಳು. ಮಹಿಳಾ ಇನ್ಸ್‌ಪೆಕ್ಟರ್ ನೇತೃತ್ವದ ತಂಡವೊಂದು ಯುವತಿಯನ್ನು ಪತ್ತೆ ಮಾಡಿರುವುದಾಗಿ ಗೊತ್ತಾಗಿದೆ. ಇದೀಗ ಯುವತಿ ಹಾಗೂ ಆಕೆಯ ಜತೆಗಿದ್ದ ಇಬ್ಬರನ್ನು ಮಡಿವಾಳದಲ್ಲಿರುವ ವಿಶೇಷ ವಿಚಾರಣಾ ಕೊಠಡಿಗೆ ಕರೆತರಲಾಗುತ್ತಿದೆ ಎಂದು ತಿಳಿದುಬಂದಿದೆ.

**ಮನೆಬಾಗಿಲಿಗೆ ನೋಟಿಸ್:** ಈ ನಡುವೆ ಪ್ರಕರಣಕ್ಕೆ ಸಂಬಂಧಿಸಿ ತನಿಖೆ ಚುರುಕುಗೊಳಿಸಿರುವ ಎಸ್‌ಐಟಿ ಅಧಿಕಾರಿಗಳು ವಿಚಾರಣೆಗೆ ಹಾಜರಾಗುವಂತೆ ಯುವತಿಗೆ ನೋಟಿಸ್ ನೀಡಿದ್ದಾರೆ.

ಭಾನುವಾರ ವಿಜಯಪುರದ ನಿಡಗುಂದಿಯಲ್ಲಿರುವ ಅಜ್ಜನ ಮನೆ ಹಾಗೂ ಬಾಗಲಕೋಟೆಯ ಗುಡೂರ ಗ್ರಾಮದ ಅಜ್ಜಿ ಮನೆಗೆ ತೆರಳಿ ಮನೆ ಬಾಗಿಲಿಗೆ ನೋಟಿಸ್ ಅಂಟಿಸಿ ಬಂದಿದ್ದಾರೆ. ಯುವತಿ ಮೂಲತಃ ಬಾಗಲಕೋಟೆ ಜಿಲ್ಲೆಯ ಗುಡೂರ ಗ್ರಾಮದವಳು. ಹೀಗಾಗಿ ಇಲ್ಲಿನ ಜನತಾ ಪ್ಲಾಟ್‌ನಲ್ಲಿರುವ ಯುವತಿಯ ಅಜ್ಜಿಯ ಮನೆಗೆ ಬೆಂಗಳೂರಿನ ಕಬ್ಬನ್‌ಪಾರ್ಕ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಯುವತಿಯ ಕುರಿತು ಮನೆಯಲ್ಲಿದ್ದ ಅಜ್ಜಿಯಿಂದ ಮಾಹಿತಿ ಕಲೆಹಾಕಲು ಪ್ರಯತ್ನಿಸಿದ್ದಾರೆ. ನಂತರ ಬಾಗಿಲಿಗೆ ನೋಟಿಸ್ ಅಂಟಿಸಿದ್ದಾರೆ.

ಇದಕ್ಕೂ ಮೊದಲು ವಿಜಯಪುರದ ನಿಡಗುಂದಿಯ ವೀರೇಶ ನಗರದಲ್ಲಿರುವ ಸಂತ್ರಸ್ತೆಯ ತಾತನ ಮನೆಗೂ ಪೊಲೀಸರು ಭೇಟಿ ನೀಡಿದ್ದಾರೆ. ಆದರೆ, ಅಲ್ಲಿ ಯಾರೂ ಇಲ್ಲದ ಕಾರಣ ಮನೆ ಬಾಗಿಲಿಗೆ ನೋಟಿಸ್ ಅಂಟಿಸಿದ್ದಾರೆ. ಸಂತ್ರಸ್ತೆಯು 1ರಿಂದ 10ನೇ ತರಗತಿಯವರೆಗೆ ನಿಡಗುಂದಿಯ ವೀರೇಶ ನಗರದಲ್ಲಿರುವ ತಾತನ ಮನೆಯಲ್ಲಿದ್ದುಕೊಂಡೇ ವಿದ್ಯಾಭ್ಯಾಸ ಮಾಡಿದ್ದಳು ಎಂಬ ಮಾಹಿತಿ ಇದೆ.

ಶನಿವಾರ ರಾತ್ರಿ ಯುವತಿ ವಿಡಿಯೋವೊಂದರಲ್ಲಿ 'ನನಗೆ ಯಾವುದೇ ರಾಜಕೀಯ ಬೆಂಬಲ ಇಲ್ಲ. ರಮೇಶ್ ಜಾರಕಿಹೊಳಿ ಅವರು ಕೆಲಸದ ಆಮಿಷವೊಡ್ಡಿ ನನ್ನ ವಿಡಿಯೋ ಚಿತ್ರೀಕರಣ ಮಾಡಿಕೊಂಡಿದ್ದು, ಇದೀಗ ಅವರೇ ವಿಡಿಯೋ ಬಿಡುಗಡೆ ಮಾಡಿದ್ದಾರೆ. ನನಗೆ ಮತ್ತು ನನ್ನ ಕುಟುಂಬಕ್ಕೆ ರಕ್ಷಣೆ ಒದಗಿಸಬೇಕು' ಎಂದು ಗೃಹ ಸಚಿವರಿಗೆ ಮನವಿ ಮಾಡಿದ್ದಳು. ಯುವತಿ ಅಜ್ಞಾತವಾಸದಲ್ಲಿರುವುದರಿಂದ ವಾಟ್ಸಪ್, ಇ-ಮೇಲ್‌ಗೆ ನೋಟಿಸ್ ರವಾನಿಸಲಾಗಿದೆ.